**ಸಾಕ್ಷಿಯನ್ನು ನ್ಯಾಯಾಲಯದ ಆದೇಶದ ಮೇರೆಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ 5 ರಿಂದ 8 ಎದುರುದಾರರ ಪರವಾಗಿ ಶ್ರೀ ಜಿ.ಇ.ಎಂ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ನನ್ನ ತಕರಾರಿಗೆ ಪೂರಕವಾಗಿ ನಾನು ಕೆಲವು ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನನ್ನ ಪರವಾಗಿ ನಿಶಾನೆಯಾಗಿ ಗುರುತಿಸುವಂತೆ ಕೋರುತ್ತೇನೆ. ಸಾಕ್ಷಿ ಹಾಜರುಪಡಿಸಿದ ದಾಖಲೆಗಳನ್ನು ಕೆಳಗಿನಂತೆ ನಿಶಾನೆಗಳಾಗಿ ಗುರುತಿಸಲಾಯಿತು.

| | |
|---|---|
| ನಿ.ಆರ್.–1 | ವಂಶವೃಕ್ಷ ದೃಢೀಕರಣ ಪತ್ರ |
| ನಿ.ಆರ್.–2 | ಪಡಿತರ ಚೀಟಿ |
| ನಿ.ಆರ್.–3 ರಿಂದ 6 | ಆಧಾರ್ ಕಾರ್ಡ್ ಗಳು |
| ನಿ.ಆರ್.–7 ರಿಂದ 9 | ಅಂಕಪಟ್ಟಿಗಳು |
| ನಿ.ಆರ್.–10 | ಜೀವ ವಿಮಾ ಪ್ರಮಾಣ ಪತ್ರ |

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗೂ ನಾನು ಹಾಜರುಪಡಿಸಿದ ದಾಖಲೆಗಳನ್ನು ಪರಿಗಣಿಸಿ ನಾನು ಸಲ್ಲಿಸಿರುವ ತಕರಾರನ್ನು ಪುರಸ್ಕರಿಸಬೇಕಾಗಿ ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಅರ್ಜಿದಾರರ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ.**